1994ರ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಿದ್ದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಮದ್ಯ ವಶಪಡಿಸಿಕೊಂಡ ಬಗ್ಗೆ

2953:(3960)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1994ರ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಿದ್ದ ಅಭ್ಯರ್ಥಿಗಳಿಗೆ ಸಂಬಂಧಪಟ್ಟಂತೆ ಸಾಗಿಸುತ್ತಿದ್ದ ಮದ್ಯಗಳನ್ನು ವಶಪಡಿಸಿಕೊಂಡದ್ದು ನಿಜವೇ? ಹಾಗಿದ್ದಲ್ಲಿ ಈ ಬಗ್ಗೆ ವಿವರ ನೀಡುವುದು

ಆ) ಅಂತಹ ಅಭ್ಯರ್ಥಿಗಳ ಮೇಲೆ ಸರ್ಕಾರದವರು ಕ್ರಮವನ್ನೇನಾದರೂ ಕೈಗೊಂಡಿದ್ದಾರೆಯೇ, (ಹಾಗಿದ್ದಲ್ಲಿ ಅದರ ಪೂರ್ಣ ವಿವರ ನೀಡುವುದು)?

ಜೆ.ಹೆಚ್.ಪಟೀಲ್ (ಮುಖ್ಯ ಮಂತ್ರಿಗಳು):

ಅ) ಅಂತಹ ಪ್ರಕರಣಗಳು ವರದಿಯಾಗಿಲ್ಲ

ಆ) ಈ ಮೇಲಿನ ''ಅ'' ವಿಭಾಗದ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನಲ್ಲಿ ವಿದೇಶಿ ಹಸ್ತಕ್ಷೇಪ ಹಾಗೂ ಐ.ಎಸ್.ಐ ಚಟುವಟಿಕೆಗಳು

2954:(3961)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ): ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನಲ್ಲಿ ಭಾರೀ ಪ್ರಮಾಣದ ವಿದೇಶಿ ಹಸ್ತಕ್ಷೇಪ ಹಾಗೂ ಐಎಸ್ಐ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಹಾಗಿದ್ದಲ್ಲಿ ಅಲ್ಲಿ ನಡೆಯುತ್ತಿರುವ ಚಟುವಟಿಕೆಗಳು ಯಾವುವು;

3. ಈ ವಿಷಯಕ್ಕೆ ಸಂಬಂಧಪಟ್ಟಂತೆ ಸಂಶಯಾಸ್ಪದ ವ್ಯಕ್ತಿಗಳನ್ನು ಬಂಧಿಸಲಾಗಿದೆಯೇ?

4. ಹಾಗಿದ್ದಲ್ಲಿ ಅವರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಆರ್.ರೋಷನ್ ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು):

1. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನಲ್ಲಿ ಭಾರೀ ಪ್ರಮಾಣದ ಶಸ್ತ್ರಾಸ್ತ್ರ ಹಾಗೂ ಐಎಸ್‌ಐ ಚಟುವಟಿಕೆಯು ನಡೆಯುತ್ತಿರುವ ಬಗ್ಗೆ ಯಾವುದೇ ದೂರುಗಳು, ಮಾಹಿತಿಗಳು ಇರುವುದಿಲ್ಲ. ದಿನಾಂಕ 24-25.9.98 ರಂದು ರಾತ್ರಿ 2.30 ಗಂಟೆಯ ಸಮಯದಲ್ಲಿ ಪುತ್ತೂರು ಶಾಸಕ ಶ್ರೀ ಸದಾನಂದ ಗೌಡರ ಹೆಂಡತಿಯವರಿಗೆ ಅನಾಮಧೇಯ ಬೆದರಿಕೆ ದೂರವಾಣಿ ಕರೆ ಬಂದಿದ್ದು, ಐಎಸ್‌ಐ ಬಗ್ಗೆ ಎಂ.ಎಲ್.ಎ. ಸದಾನಂದ ಗೌಡರು ಸಭೆಗಳಲ್ಲಿ ಮಾತನಾಡುತ್ತಿದ್ದಾರೆಂದು ಇನ್ನು ಮುಂದೆ ಈ ಬಗ್ಗೆ ಮಾತನಾಡಿದರೆ ಅವರನ್ನು ಮುಗಿಸಿಬಿಡುತ್ತೇನೆ ಎಂದು ಹಿಂದಿ ಭಾಷೆಯಲ್ಲಿ ಮಾತನಾಡಿದ ಬಗ್ಗೆ ವರದಿಯಾಗಿದೆ. ಇದರ ಬಗ್ಗೆ ಸೂಕ್ಷ್ಮ ವಿಚಾರಣೆ ನಡೆಯುತ್ತಿದೆ.

2. ಯಾವುದೇ ನಿರ್ದಿಷ್ಟ ಐಎಸ್‌ಐ ಚಟುವಟಿಕೆಗಳು ನಡೆಯುತ್ತಿರುವುದು ಈವರೆಗೆ ಗಮನಕ್ಕೆ ಬಂದಿರುವುದಿಲ್ಲ.

3. ಈ ವಿಷಯದಲ್ಲಿ ಯಾವುದೇ ವ್ಯಕ್ತಿಗಳನ್ನು ಈವರೆಗೆ ಬಂಧಿಸಲಾಗಿಲ್ಲ.

4. ಉದ್ಭವಿಸುವುದಿಲ್ಲ, ಆದರೂ ಈ ಬಗ್ಗೆ ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಆದೇಶಿಸಲಾಗಿದೆ. ಈ ಕುರಿತು ಸೂಕ್ಷ್ಮ ಪ್ರದೇಶ ಹಾಗೂ ಇತರೆ ಕಡೆಗಳಲ್ಲಿ ಮಾಹಿತಿ ಸಂಗ್ರಹಿಸಲು ಗುಪ್ತವಾರ್ತಾ ಸಿಬ್ಬಂದಿ ಹಾಗೂ ಬಾತ್ಮೀದಾರರನ್ನು ನೇಮಿಸಲಾಗಿದೆ. ಮೂಲಭೂತ ಸಂಘಟನೆಗಳ ಬಗ್ಗೆ ಹಾಗೂ ವಿದೇಶಿಯರ ಚಲನವಲನಗಳ ಬಗ್ಗೆ ಮುಖ್ಯವಾಗಿ ವಿಮಾನ ನಿಲ್ದಾಣ, ಹಡಗು ನಿಲ್ದಾಣ ಹಾಗೂ ಕರಾವಳಿಯ ಸೂಕ್ಷ್ಮ ಪ್ರದೇಶಗಳಲ್ಲಿ ತೀವ್ರ ನಿಗಾ ಇಡಲಾಗಿದೆ. ವಿದೇಶಿಯರ ಚಲನವಲನಗಳ ಬಗ್ಗೆ ರಾತ್ರಿ ಹಗಲು ಕಟ್ಟುನಿಟ್ಟಿನ ನಿಗಾ ಇಡಲಾಗುತ್ತಿದೆ.

ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಖಾಲಿ ಇರತಕ್ಕ ಪೊಲೀಸ್ ಸಿಬ್ಬಂದಿ ಭರ್ತಿ

2956:(4081)

ಶ್ರೀ ಎನ್.ವೈ.ಗೋಪಾಲಕೃಷ್ಣ (ಮೊಳಕಾಲ್ಮೂರು): ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಮಂಜೂರಾದ ಪೊಲೀಸ್ ಹುದ್ದೆಗಳೆಷ್ಟು?